# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:108 RNI NO.KAR KAN/2003/10452:No./PMG/KA/NK/BM/743/24-26 ಗುರುವಾರ ದಿನಾಂಕ: 21-03-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಸಾಮಾಜಿಕ ಜಾಲತಾಣಗಳಲ್ಲಿ ರಾಜಕೀಯ ಜಾಹಿರಾತುಗಳಿಗೆ ಪೂರ್ವಾನುಮತಿ ಕಡ್ಡಾಯ



ಬೆಂಗಳೂರು,ಮಾ.20– ಪ್ರಸ್ತುತ ಲೋಕಸಭೆ ಚುನಾವಣೆ ನೀತಿ ಸಂಹಿತೆ ಮಾ.16ರಿಂದ ದೇಶಾದ್ಯಂತ ಜಾರಿಗೆ ಬಂದಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಪ್ರಸಾರವಾಗುವ ರಾಜಕೀಯ ಜಾಹಿರಾತುಗಳಿಗೆ ಚುನಾವಣಾ ಆಯೋಗದ ಪೂರ್ವಾನುಮತಿ ಅಗತ್ಯ ಎಂದು ರಾಜ್ಯ ಮುಖ್ಯ ಚುನಾವಣಾ ಅಧಿಕಾರಿ ಮನೋಜ್‌ಕುಮಾರ್ ಮೀನಾ ತಿಳಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ವತಿಯಿಂದ ಲೋಕಸಭೆ ಚುನಾವಣೆ 2024ರ ಅಂಗವಾಗಿ ಚುನಾವಣೆ ಸಮಯದಲ್ಲಿ ಮಾಧ್ಯಮ ಕಾರ್ಯಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮತದಾನ ಪ್ರಾರಂಭವಾಗುವ 48 ಗಂಟೆಗೂ ಮುನ್ನ ಸಮೀಕ್ಷೆ ಮಾಡುವಂತಿಲ್ಲ. ಮುದ್ರಣ ಮಾಧ್ಯಮಗಳು ಆ ಸಂದರ್ಭದಲ್ಲಿ ಪ್ರಕಟಿಸುವ ಜಾಹಿರಾತುಗಳಿಗೆ ಆಯೋಗದ ಪೂರ್ವಾನುಮತಿ ಪಡೆಯಬೇಕು. ದೃಶ್ಯ ಮಾಧ್ಯಮಗಳು ಕೂಡ ಪ್ರಕಟಿಸುವ ಜಾಹಿರಾತಿಗೆ ಅನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದರು.

ಚುನಾವಣಾ ಸಂದರ್ಭದಲ್ಲಿ ಮಾಧ್ಯಮಗಳ ಪಾತ್ರವು ಪ್ರಮುಖವಾಗಿದೆ. ಎಂಸಿಎಂಸಿ ಸಮಿತಿಯ ಅನುಮತಿ ಪಡೆಯಬೇಕು. ಗುರುತಿಸಲ್ಪಟ್ಟ ಅಗತ್ಯ ಸೇವೆಗಳಲ್ಲಿ ಕಾರ್ಯ ನಿರ್ವಹಿಸುವವರಿಗೆ ಅಂಚೆ ಮತದಾನದ ವ್ಯವಸ್ಥೆ ಮಾಡಲಾಗಿದ್ದು, ನೋಡೆಲ್ ಅಧಿಕಾರಿಗಳನ್ನು ಅದಕ್ಕಾಗಿ ನೇಮಿಸಲಾಗಿದೆ ಎಂದು ಹೇಳಿದರು.

ಮತಗಟ್ಟೆ ಸಮೀಕ್ಷೆ ಇಲ್ಲ: ಲೋಕಸಭೆ ಚುನಾವಣೆಯ ಮೊದಲ ಹಂತದ ಮತದಾನದಿಂದ ಕೊನೆಯ ಹಂತದ ಮತದಾನ ಮುಗಿಯುವವರೆಗೂ ಮತಗಟ್ಟೆ ಅಭಿಪ್ರಾಯ ಸಂಗ್ರಹ ಅಥವಾ ಸಮೀಕ್ಷೆ ಮಾಹಿತಿಯನ್ನು ಪ್ರಕಟಿಸುವಂತಿಲ್ಲ ಎಂದು ರಾಜ್ಯ ಅಪರ ಮುಖ್ಯ ಚುನಾವಣಾಧಿಕಾರಿ ವೆಂಕಟೇಶ್ ತಿಳಿಸಿದರು. ಮತದಾರರ ವೈಯಕ್ತಿಕ ಮಾಹಿತಿ ಸಂಗ್ರಹ ಮಾಡಲು ಅವಕಾಶವಿಲ್ಲ. ಹಾಗೊಂದು ವೇಳೆ ಮಾಡಿದರೆ ಅಪರಾಧವಾಗಲಿದೆ. ಒಬ್ಬರೇ ಅಭ್ಯರ್ಥಿ ಪರವಾಗಿ ಸುದ್ದಿ ಪ್ರಕಟಿಸಿದರೆ ಅದು ಪಾವತಿ ಸುದ್ದಿಯಾಗುತ್ತದೆ. ಕಳೆದ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ನೀತಿ ಸಂಹಿತೆ ಉಲ್ಲಂಘಿಸಿದ ಎರಡೂವರೆ ಸಾವಿರ ಪ್ರಕರಣಗಳು ದಾಖಲಾಗಿದ್ದವು ಎಂದರು.

ಬರ ಪರಿಹಾರ ಕಾರ್ಯಗಳಿಗೆ ಅಡ್ಡಿ ಇಲ್ಲ: ಈಗಾಗಲೇ ರಾಜ್ಯದಲ್ಲಿ ಘೋಷಣೆಯಾಗಿರುವ ಬರಪೀಡಿತ ತಾಲ್ಲೂಕುಗಳಲ್ಲಿ ಬೋರ್‌ವೆಲ್ ಕೊರೆಸುವುದು, ನೀರು ಪೂರೈಕೆಯಂತಹ ತುರ್ತು ಕಾರ್ಯಗಳಿಗೆ ನೀತಿ ಸಂಹಿತೆ ಅಡ್ಡಿಯಾಗುವುದಿಲ್ಲ. ನೈಸರ್ಗಿಕ ವಿಕೋಪಕ್ಕೆ ಸಂಬಂಧಿಸಿದ ಸಭೆಯ ಹೊರತು ಬೇರೆ ರೀತಿಯ ಸಭೆಗಳನ್ನು ಮುಖ್ಯಮಂತ್ರಿಗಳು, ಸಚಿವರು ಮಾಡುವಂತಿಲ್ಲ. ಒಂದು ವೇಳೆ ಅಗತ್ಯಬಿದ್ದರೆ ಮುಖ್ಯ ಚುನಾವಣಾಧಿಕಾರಿಗಳ ಅನುಮತಿ ಪಡೆಯಬೇಕು.

ಸಾರ್ವಜನಕ ರ್ಯಾಲಿಗಳಲ್ಲಿ ವಾಹನಗಳ ಮಿತಿಯನ್ನು 10ಕ್ಕೆ ನಿಗದಿಗೊಳಿಸಲಾಗಿದೆ. ಜಾಹಿರಾತು ಪ್ರಕಟಣೆಗೆ ಆಯೋಗದ ಪೂರ್ವ ಪ್ರಮಾಣೀಕರಣವಾಗಬೇಕು ಎಂದು ಹೇಳಿದರು. ಈಗಾಗಲೇ ರಾಜಕೀಯ ಪಕ್ಷಗಳಿಗೂ ನೀತಿ ಸಂಹಿತೆ ಪಾಲನೆ ಮಾಡಲು ಸೂಚನೆ ನೀಡಲಾಗಿದೆ ಎಂದರು.ರಾಜ್ಯ ಅಪರ ಮುಖ್ಯ ಚುನಾವಣಾಧಿಕಾರಿ ಕೂರ್ಮ ರಾವ್ ಮಾತನಾಡಿ, ಚುನಾವಣಾ ಆಯೋಗ ನಿಗದಿಪಡಿಸಿರುವ ಅತ್ಯವಶ್ಯಕ 16 ಸೇವೆಗಳಲ್ಲಿ ಮಾಧ್ಯಮದವರು ಬರುತ್ತಾರೆ. ಇಡೀ ದಿನ ಚುನಾವಣಾ ಕಾರ್ಯಕ್ಕೆ ನಿಯೋಜನೆಯಾದವರು ನಮೂನೆ 12ಡಿ ಬಳಕೆ ಮಾಡಬೇಕು. ನೋಡೆಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಅಂಥವರಿಗೆ ಅಂಚೆ ಮತದಾನ ಕೇಂದ್ರದಲ್ಲಿ ಅಂಚೆ ಮತಪತ್ರದ ಮೂಲಕ ಮತದಾನ ಮಾಡಲು ಅವಕಾಶ ಮಾಡಿಕೊಡಲಾಗುತ್ತಿದೆ ಎಂದರು.

## ಶೆಟ್ಟರ್ ಗೋ ಬ್ಯಾಕ್ ಅಭಿಯಾನ




ಬೆಳಗಾವಿ.ಬೆಳಗಾವಿ ಲೋಕಸಭಾ ಮತಕ್ಷೇತ್ರಕ್ಕೆ ಜಗದೀಶ್ ಶೆಟ್ಟರ್ ಗೆ ಬಹುತೇಕ ಟಿಕೆಟ್ ಫೈನಲ್ ಆಗಿರುವ ಹಿನ್ನೆಲೆಯಲ್ಲಿ ಇಷ್ಟು ದಿನ ಸಾಮಾಜಿಕ ಜಾಲತಾಣಕ್ಕೆ ಸಿಮೀತವಾಗಿದ್ದ ಶೆಟ್ಟರ್ ಗೋ ಬ್ಯಾಕ್ ಅಭಿಯಾನ ಬುಧವಾರ ಚನ್ನಮ್ಮ ವೃತ್ತದ ಬಳಿ ಬರ್ರಿ ಶೆಟ್ಟರೆ ಉಂಡು ಹೋಗ್ರಿ ಬೆಳಗಾವಿ ನಮ್ಮಂಥವರಿಗೆ ಬಿಟ್ಟಿ ಬಿದೈತ್ತಿ ಎನ್ನುವ ನಾಫಲಕ ಅಳವಡಿಸಿ ವಿರೋಧ ವ್ಯಕ್ತಪಡಿಸಿದ್ದಾರೆ.

ಶೆಟ್ಟರ್ ಗೋ ಬ್ಯಾಕ್ ಅಭಿಯಾನದಲ್ಲಿ ಉತ್ತರ ಕರ್ನಾಟಕ ಶೈಲಿ ಊಟ ಮೆನು ಸಹ ಬ್ಯಾನರ್ ನಲ್ಲಿದೆ. ಹೋಳಿಗೆ ಪಲ್ಲೆ, ಸಾವಗಿ ಪಾಯಸ್, ರೈಸ್,ಪಲಾವ್ ಬಾಜಿ ಚಿತ್ರದ ಬ್ಯಾನರ್ ನಲ್ಲಿ ಶೆಟ್ಟರ್ ಸ್ಪರ್ಧೆಗೆ ವ್ಯಂಗ್ಯವಾಗಿ ವಿರೋಧಿಸಿದ್ದಾರೆ.

## ಬೇಳೂರು ಗ್ರಾಮದಲ್ಲಿ ಸ್ವೀಪ್ ಜಾಥಾ ಕಾರ್ಯಕ್ರಮ




ಕೊಪ್ಪಳ, ಮಾರ್ಚ್ 20 : ಲೋಕಸಭಾ ಸಾರ್ವತ್ರಿಕ ಚುನಾವಣೆ ನಿಮಿತ್ಯ ಮತದಾನ ಕುರಿತು ಮತದಾರರಲ್ಲಿ ಜಾಗೃತಿ ಮೂಡಿಸಲು ಕೊಪ್ಪಳ ತಾಲೂಕಿನ ಕಾತರಕಿ-ಗುಡ್ಲಾನೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಬೇಳೂರು ಗ್ರಾಮದಲ್ಲಿ ನರೇಗಾ ಕಾಯಕ ಬಂಧುಗಳು ಹಾಗೂ ಕೂಲಿಕಾರರಿಂದ ಬುಧವಾರದಂದು (ಮಾ.20) ರಂದು ಸ್ವೀಪ್ ಜಾಥಾ ಕಾರ್ಯಕ್ರಮ ಜರುಗಿತು.

ಸ್ವೀಪ್ ಜಾಥಾವು ಬೇಳೂರು ಗ್ರಾಮದ ಬೆಟ್ಟದ ಲಿಂಗೇಶ್ವರ ದೇವಸ್ಥಾನದಿಂದ ಆರಂಭವಾಗಿ ಹಿರೇಸಿಂಧೊಗಿ ರಸ್ತೆಯಲ್ಲಿರುವ ಬಸ್ ನಿಲ್ದಾಣದವರೆಗೆ ಕಡ್ಡಾಯ ಮತದಾನ, ನಮ್ಮ ಮತ ನಮ್ಮ ಹಕ್ಕು ಇತ್ಯಾದಿ ಘೋಳಣೆಗಳೊಂದಿಗೆ ಸಾಗಿ ಮುಕ್ತಾಯಗೊಂಡಿತು.

ತಾಲೂಕ ಸ್ವೀಪ್ ನೋಡಲ್ ಅಧಿಕಾರಿ ಹಾಗು ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಹನಮಂತಪ್ಪ ಮಾತನಾಡಿ, ಮೇ-7ರಂದು ಜರುಗುವ ಚುನಾವಣೆಯಲ್ಲಿ ಕಡ್ಡಾಯವಾಗಿ ಮತಗಟ್ಟೆ ಕೇಂದ್ರಕ್ಕೆ ಹೋಗಿ ಮತ ಚಲಾಯಿಸುವುದರ ಮೂಲಕ ಸುಭದ್ರ ದೇಶ ನಿರ್ಮಿಸೋಣ. ಮತದಾನ ದಿನದಂದು ನಾವು ಸಮಯ ವ್ಯರ್ಥ ಮಾಡದೇ ಚುನಾವಣೆ ಆಯೋಗ ನಿಗದಿಪಡಿಸಿದ ದಾಖಲಾತಿಗಳನ್ನು ತೆಗೆದುಕೊಂಡು ಹೋಗಿ ನಮಗೆ ಸೂಕ್ತ ಎನಿಸುವ ವ್ಯಕ್ತಿಗೆ ಮತ ಚಲಾಯಿಸಬೇಕು. ಕೊಪ್ಪಳ ತಾಲೂಕಿನ ಬೇಳೂರು ಗ್ರಾಮದಿಂದ ಸ್ವೀಪ್ ಕಾರ್ಯಕ್ರಮ ಪ್ರಾರಂಭಿಸಲಾಗಿದ್ದು ಕೂಲಿಕಾರರು ಮತದಾನ ಮಾಡಿ ಇತರರಿಗೆ ಮಾದರಿಯಾಗಬೇಕೆಂದು ಕರೆ ನೀಡಿದರು. ಕಳೆದ ಬಾರಿಗಿಂತ ಈ ಬಾರಿ ವಿನೂತನವಾಗಿ ಸ್ವೀಪ್ ಕಾರ್ಯಕ್ರಮಗಳನ್ನು ಜರುಗಿಸುವ ಮೂಲಕ ಜಿಲ್ಲೆಯ ಮತದಾನ ಶೇಕಡಾವಾರು ಪ್ರಮಾಣವನ್ನು ಹೆಚ್ಚಿಸೋಣ ಎಂದರು.

ತಾಲೂಕ ಯೋಜನಾಧಿಕಾರಿ ರಾಜೇಸಾಬ ನದಾಫ್ ಮಾತನಾಡಿ, ಮತದಾನ ಪವಿತ್ರವಾದ ಕಾರ್ಯ. ಮತದಾನದ ಮೂಲಕ ದೇಶಕ್ಕೆ ದೊಡ್ಡ ಕೊಡುಗೆ ನೀಡಿದಂತಾಗುತ್ತದೆ ಎಂದರು. ಸ್ವೀಪ್ ಕಾರ್ಯಕ್ರಮದಲ್ಲಿ ಸೇರಿರುವ ಎಲ್ಲಾ ನರೇಗಾ ಕೂಲಿಕಾರರು ನಮ್ಮ ಕುಟುಂಬದ 18 ವರ್ಷ ಮೇಲ್ಪಟ್ಟ ಸದಸ್ಯರು ಮತ ಚಲಾಯಿಸುವ ಮೂಲಕ ದೇಶಕ್ಕೆ ಸುಭದ್ರ ಆಡಳಿತ ಒದಗಿಸಲು ಕೈ ಜೋಡಿಸೋಣ ಎಂದರು.

ನಂತರ ಮತದಾರರ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು. ಈ ಸಂದರ್ಭ ತಾಲೂಕ ಸ್ವೀಪ್ ಸಮಿತಿ ಸದಸ್ಯರಾದ ಬಸವರಾಜ ಬಳಿಗಾರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಪಂಚಾಯತ ಅಭಿವೃದ್ಧಿ ಅಧಿಕಾರಿ ಪೂರ್ಣೇಂದ್ರಸ್ವಾಮಿ, ಕರವಸೂಲಿಗಾರ ಮರ್ದಾನಸಾಬ, ಡಿಇಓ ನಿಂಗಜ್ಜ ಕರಿಗಾರ, ಕಾಯಕ ಬಂಧುಗಳು, 320 ಕ್ಕೂ ನರೇಗಾ ಕೂಲಿಕಾರರು ಹಾಜರಿದ್ದರು.

## ರಾಮೇಶ್ವರಂ ಕೆಫೆ ಸ್ಫೋಟಕ್ಕೂ ತಮಿಳುನಾಡಿಗೂ ನಂಟು ಹೇಳಿಕೆ: ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಿರುದ್ಧ ಕೇಸ್ ದಾಖಲು



ಮಧುರೈ: ಬೆಂಗಳೂರಿನ ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣದ ಶಂಕಿತ ಆರೋಪಿ ತಮಿಳುನಾಡಿನವನು ಎಂದು ಹೇಳಿಕೆ ನೀಡಿದ್ದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಿರುದ್ಧ ಮಧುರೈ ನಗರ ಪೊಲೀಸರು ಬುಧವಾರ ಪ್ರಕರಣ ದಾಖಲಿಸಿ ದ್ದಾರೆ.ತಮಿಳುನಾಡು ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ಅವರು ಶೋಭಾ ಕರಂದ್ಲಾಜೆ ಅವರ ಹೇಳಿಕೆಯನ್ನು ಖಂಡಿಸಿ 'ಎಕ್ಸ್' ನಲ್ಲಿ ಪೋಸ್ಟ್ ಹಾಕಿದ್ದರು. ಅಲ್ಲದೆ ಶಾಂತಿ, ಸೌಹಾರ್ದತೆ ಮತ್ತು ರಾಷ್ಟ್ರೀಯ ಏಕತೆಗೆ ಧಕ್ಕೆ ಉಂಟು ಮಾಡುವ ಹೇಳಿಕೆ ನೀಡಿದವರ ವಿರುದ್ಧ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದ್ದರು.ದ್ವೇಷದ ಭಾಷಣವನ್ನು ಗಮನಿಸಬೇಕು ಮತ್ತು ತಕ್ಷಣವೇ ಅವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕು ಎಂದು ಕೇಂದ್ರ ಚುನಾವಣಾ ಆಯೋಗಕ್ಕೆ ತಮಿಳುನಾಡು ಸಿಎಂ ಒತ್ತಾಯಿಸಿದ್ದರು. ತಮ್ಮ ಪಕ್ಷದ ಪ್ರತಿಯೊಬ್ಬರೂ ಕೊಳಕು ಮತ್ತು ವಿಭಜಕ ರಾಜಕೀಯದಲ್ಲಿ ತೊಡಗುವುದನ್ನು ನಿಲ್ಲಿಸಬೇಕೆಂದು ಪ್ರಧಾನ ಮೋದಿಯವರಿಗೆ ಸ್ಟಾಲಿನ್ ಆಗ್ರಹಿಸಿದ್ದರು.ಈ ಸಂಬಂಧ ಮಧುರೈನ ಕಡಚನೆಂತಲ್‌ನ ಸಿ ತ್ಯಾಗರಾಜನ್ ಅವರು, ಕೇಂದ್ರ ಸಚಿವೆ ವಿರುದ್ಧ ಪೊಲೀಸರಿಗೆ ದೂರು ನೀಡಿದ್ದು, ಪ್ರಕರಣವನ್ನು ಅಧಿಕಾರಿ ಗಳು ಇನ್ನೂ ತನಿಖೆ ನಡೆಸುತ್ತಿರುವ ಸಮಯದಲ್ಲಿ ಶೋಭಾ ಅವರ ಹೇಳಿಕೆಯು ತಮಿಳು ಮತ್ತು ಕನ್ನಡಿ ಗರ ನಡುವೆ ದ್ವೇಷ ಮತ್ತು ಅಸಮಾ ಧಾನ ಉಂಟುಮಾಡುತ್ತದೆ ಎಂದು ದೂರು ದಾರರು ಟೀಕಿಸಿದ್ದಾರೆ.ಬಿಜೆಪಿ ನಾಯಕರ ಹೇಳಿಕೆಯು ತಮಿಳು ಜನರನ್ನು ಭಯೋತ್ಪಾದಕರು ಎಂದು ಗುರುತಿಸಿದೆ ಮತ್ತು ಇದು ಉಭಯ ರಾಜ್ಯಗಳ ಸಂಬಂಧವನ್ನು ಹಾಳುಮಾಡುತ್ತದೆ ಮತ್ತು ಎರಡೂ ರಾಜ್ಯಗಳ ಜನರ ನಡುವೆ ಉದ್ವಿಗ್ನತೆಯನ್ನು ಉಂಟು ಮಾಡುತ್ತದೆ ಎಂದು ದೂರುದಾರರು ಆರೋಪಿಸಿ ದ್ದಾರೆ. ದೂರಿನ ಆಧಾರದ ಮೇಲೆ ಮಧುರೈ ನಗರದ ಸೈಬರ್ ಕ್ರೈಂ ಠಾಣೆ ಪೊಲೀಸರು, ಕೇಂದ್ರ ಸಚಿವೆ ವಿರುದ್ಧ ಐಪಿಸಿ ಸೆಕ್ಷನ್ 153, 153 ಎ, 505 (1) (ಬಿ) ಮತ್ತು 505 (2) ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

## ಅಂಗನವಾಡಿ ಕಾರ್ಯಕರ್ತೆಯರ ಸಭೆ ನಡೆಸಿಲ್ಲ-ಲಕ್ಷ್ಮೀ ಹೆಬ್ಬಾಳ್ಕರ್

ಬೆಳಗಾವಿ : ಅಂಗನವಾಡಿ ಕಾರ್ಯಕರ್ತೆಯರಿಗೆ ಇತ್ತೀಚೆಗೆ ಕೆಲಸದ ಒತ್ತಡ ಜಾಸ್ತಿಯಾಗಿದೆ. ಅವರ ಕೆಲಸದ ಒತ್ತಡವನ್ನು ನಿವಾರಿಸಬೇಕೆಂದು ಮನವಿ ಪತ್ರ ನೀಡಲು ಬಂದಿದ್ದರು. ಚುನಾವಣೆಗೆ ಸಂಬಂಧಪಟ್ಟಂತೆ ನಾನು ಸಭೆ ನಡೆಸಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಸ್ಪಷ್ಟನೆ ನೀಡಿದ್ದಾರೆ.

ನೀತಿ ಸಂಹಿತೆ ಉಲ್ಲಂಘಿಸಿ ಸಚಿವರು ಅಂಗವಾಡಿ ಕಾರ್ಯಕರ್ತೆಯರ ಸಭೆ ನಡೆಸಿದ್ದಾರೆ ಎಂದು ಆರೋಪಕ್ಕೆ ಪ್ರತಿಕ್ರಿಯಿಸಿದ ಸಚಿವರು, ಅಂಗನವಾಡಿ ಕಾರ್ಯಕರ್ತರಿಗೆ ಕೆಲಸದ ಒತ್ತಡ ಜಾಸ್ತಿಯಾಗಿದೆ. ಇತ್ತೀಚೆಗೆ ಪಲ್ಸ್ ಪೋಲೀಯೋ, ಸರ್ಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಸರ್ವೆ ಮಾಡಿದ್ದರು. ಈಗ ಬಿಎಲ್‌ಓ ಆಗಿ ಕೆಲಸ ಮಾಡ್ತಿದ್ದಾರೆ. ಬಿಎಲ್‌ಓ ಆಗಲು ನಮಗೆ ತೊಂದರೆ ಆಗುತ್ತಿದೆ ಎಂದು ನನಗೆ ಹೇಳಲು ಬಂದಿದ್ದಾರೆ. ಆದರೆ, ನಾನೇ ಅವರಿಗೆ ತಿಳಿ ಹೇಳಿ ಕೆಲಸ ಮಾಡಲು ಸೂಚಿಸಿದೆ ಎಂದರು.

ನಿಯಮ ಉಲ್ಲಂಘಿಸಿಲ್ಲ

ಚುನಾವಣೆ ವೇಳೆ ದೂರು ನೀಡುವುದು ಸರ್ವೆ ಸಾಮಾನ್ಯ. ದೂರು ಕೊಡಲಿ, ಓರ್ವ ಜವಾಬ್ದಾರಿ ಯುತ ಸ್ಥಾನದಲ್ಲಿದ್ದು ಕೊಂಡು ನಾನು ನಿಯಮ ಉಲ್ಲಂಘಿಸಿಲ್ಲ. ನಾನು ದೇಶದ ಕಾನೂನಿಗೆ ಗೌರವ ಕೊಡುತ್ತೇನೆ. ನನಗೆ ಇದು ಐದನೇ ಚುನಾವಣೆ. ನನಗೆ ಚುನಾವಣೆ ಎದುರಿಸುವುದು ಹೇಗೆ ಎಂಬುದು ಗೊತ್ತು ಎಂದು ಸಚಿವರು ಹೇಳಿದರು.ಹೈಕಮಾಂಡ್ ನಿರ್ಧಾರಕ್ಕೆ ಬದ್ಧ ಎಂದ ಮೃಣಾಲ್ ಹೆಬ್ಬಾಳ್ಕರ್ ಬೆಳಗಾವಿ ಜಿಲ್ಲೆಯಲ್ಲಿ ಹಲವು ವರ್ಷಗ ಳಿಂದ ಕಾಂಗ್ರೆಸ್ ಪಕ್ಷದ ಸಂಘಟನೆಗೆ ದುಡಿಯುತ್ತಿರುವೆ. ಕಾರ್ಯಕರ್ತರ ಕಷ್ಟ ಸುಖಗಳಿಗೆ ಸ್ಪಂದಿಸಿರುವೆ. ಬೆಳಗಾವಿ ಲೋಕಸಭಾ ಕ್ಷೇತ್ರದ ಟಿಕೆಟ್ ವಿಚಾರಕ್ಕೆ ಹೈಕಮಾಂಡ್ ನಿರ್ಧಾರಕ್ಕೆ ಬದ್ಧನಾಗಿರುವೆ ಎಂದು ಯುವ ಕಾಂಗ್ರೆಸ್ ಮುಖಂಡ ಮೃಣಾಲ್ ಹೆಬ್ಬಾಳ್ಕರ್ ಹೇಳಿದ್ದಾರೆ. ಹೈಕಮಾಂಡ್ ನನ್ನನ್ನು ಗುರುತಿಸಿ ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಟಿಕೆಟ್ ನೀಡಿ ದರೆ, ಜಿಲ್ಲಾ ಹಾಗೂ ರಾಜ್ಯ ಮಟ್ಟದ ನಾಯ ಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸ್ಪರ್ಧೆಗಿಳಿಯುವೆ ಎಂದರು. ಎದುರಾಳಿ ಯಾರೇ ಇದ್ದರೂ ತಲೆಕೆಡಿಸಿ ಕೊಂ ಡಿಲ್ಲ. ನಮ್ಮ ಮುಖಂಡರಾದ ಸತೀಶ್ ಜಾರಕಿ ಹೊಳಿ ಅವರು, ಅಪಾರ ಸಂಖ್ಯೆಯ ಕಾರ್ಯ ಕರ್ತರ ಆಶೀ ರ್ವಾದದೊಂದಿಗೆ ಕಣಕ್ಕಿಳಿಯುವೆ ಎಂದು ಹೇಳಿದರು.

## ಬಾಳೆಹಣ್ಣಿನ ಮೇಲೆ ಬಿ.ವೆಂಕಟೇಶ್ ಪ್ರಸಾದ್ ಮುಂದಿನ ಎಂಪಿ ಎಂದು ಬರೆದು ಸಿಡಿಬಂಡಿಗೆ ಎಸೆದ ಜನರು



ಬಳ್ಳಾರಿ ಮಾ–:. ಸಚಿವ ಬಿ.ನಾಗೇಂದ್ರ ಹಾಗೂ ಬಿ.ವೆಂಕಟೇಶ್ ಪ್ರಸಾದ್ ಅವರು ಅಭಿಮಾನಗಳು ಬಾಳೆ ಹಣ್ಣಿನ ಮೇಲೆ ಬಿ.ವೆಂಕಟೇಶ್ ಪ್ರಸಾದ್ ಮುಂದಿನ ಎಂಪಿ ಎಂದು ಬರೆದು ಸಿಡಿಬಂಡಿಗೆ ಎಸೆಯುವ ಮೂಲಕ ಶ್ರೀ ಕನಕ ದುರ್ಗಮ್ಮ ದೇವಿಗೆ ಹರಿಕೆ ಹೊತ್ತಿದ್ದಾರೆ.

ಬಳ್ಳಾರಿ ನಗರದಲ್ಲಿ ನಡೆದ ಅಧಿದೇವತೆ ಶ್ರೀ ಕನಕ ದುರ್ಗಮ್ಮ ದೇವಿಯ ಸಿಡಿಬಂಡಿ ರಥೋತ್ಸವದ ವೇಳೆ ಭಕ್ತರು ಬಾಳೆ ಹಣ್ಣಿನ ಮೇಲೆ "ನೆಕ್ಸ್ಟ್ ಎಂಪಿ ಬಿ.ವೆಂಕಟೇಶ್ ಪ್ರಸಾದ್ ಅಣ್ಣ' ಎಂದು ಇಂಗ್ಲೀಷ್‌ನಲ್ಲಿ ಬರೆದು ಸಿಡಿಬಂಡಿ ರಥೋತ್ಸವಕ್ಕೆ ಎಸೆಯುವ ಮೂಲಕ ಅಭಿಮಾನದ ಪರಾಕಾಷ್ಟೆ ಮೆರೆದಿದ್ದಾರೆ.

ಇನ್ನು ಬಿ.ವೆಂಕಟೇಶ್ ಪ್ರಸಾದ್ ಅವರೇ ಕಾಂಗ್ರೆಸ್ ಎಂಪಿ ಅಭ್ಯರ್ಥಿ ಎನ್ನುವ ಕೂಗು ಎಲ್ಲೆಡೆ ಕೇಳಿ ಬರುತ್ತಿದೆ. ಒಂದು ವೇಳೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಟಿಕೆಟ್ ಸಿಕ್ಕಿದ್ದೆಯಾದರೆ ಬಿ.ವೆಂಕಟೇಶ್ ಪ್ರಸಾದ್ ಅವರೇ ಎಂಪಿ ಸ್ಥಾನ ಅಲಂಕರಿಸಬೇಕೆನ್ನು ವುದು ಅವರ ಅಭಿಮಾನಿಗಳ ಆಶಯವಾಗಿದೆ.

## ಎನ್‌ಕೌಂಟರ್ ಸ್ಪೆಷಲಿಸ್ಟ್ ಪ್ರದೀಪ್ ಶರ್ಮಾಗೆ ಜೀವಾವಧಿ ಶಿಕ್ಷೆ

ಮುಂಬೈ: ಮುಂಬೈನ ವಿವಾದಿತ 'ಎನ್‌ಕೌಂಟರ್ ಸ್ಪೆಷಲಿಸ್ಟ್' ಪ್ರದೀಪ್ ಶರ್ಮಾ ಅವರಿಗೆ ಬಾಂಬೆ ಹೈಕೋರ್ಟ್ ಜೀವಾವಧಿ ಶಿಕ್ಷೆ ವಿಧಿಸಿದೆ. ಆ ಮೂಲಕ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಎನ್‌ಕೌಂಟರ್ ಸ್ಪೆಷಲಿಸ್ಟ್ ಒಬ್ಬರಿಗೆ ಜೀವಾವಧಿ ಶಿಕ್ಷೆ ವಿಧಿಸಿದಂತಾಗಿದೆ.

2006ರಲ್ಲಿ ಮುಂಬೈನಲ್ಲಿ ಗ್ಯಾಂಗ್‌ಸ್ಟರ್ ಛೋಟಾ ರಾಜನ್‌ನ ಆಪ್ತ ಸಹಾಯಕ ರಾಮನಾರಾಯಣ ಗುಪ್ತಾ ಅವರ ನಕಲಿ ಎನ್‌ಕೌಂಟರ್ ಸಾವಿನ ಪ್ರಕರಣದಲ್ಲಿ ನ್ಯಾಯಾಲಯವು ಪ್ರದೀಪ್ ಶರ್ಮಾ ಅವರನ್ನು ದೋಷಿ ಎಂದು ಘೋಷಿಸಿತ್ತು, ಆದರೆ ಇತರ 13 ಆರೋಪಿಗಳ ಶಿಕ್ಷೆಯನ್ನು ನ್ಯಾಯಾಲಯ ಎತ್ತಿಹಿಡಿದಿತ್ತು.

ನ್ಯಾಯಮೂರ್ತಿಗಳಾದ ರೇವತಿ ಮೋಹಿತೆ ದೇರೆ ಮತ್ತು ಗೌರಿ ಗೋಡ್ಸೆ ಅವರಿದ್ದ ಪೀಠ, 'ಪೊಲೀಸರು ಗುಪ್ತಾ ಅವರನ್ನು ಕೊಂದಿದ್ದಾರೆ ಎಂದು ಪ್ರಾಸಿಕ್ಯೂಷನ್ ಸಾಬೀತುಪಡಿಸಿದೆ ಮತ್ತು ಅದನ್ನು ನಿಜವಾದ ಎನ್‌ಕೌಂಟರ್‌ನಂತೆ ಬಿಂಬಿಸಿದೆ' ಎಂದು ಹೇಳಿದೆ.

ಪ್ರಕರಣದಲ್ಲಿ 12 ಮಾಜಿ ಪೊಲೀಸರು ಮತ್ತು ನಾಗರಿಕ ಸೇರಿದಂತೆ 13 ಇತರ ಆರೋಪಿಗಳ ಅಪರಾಧ ಮತ್ತು ಜೀವಾವಧಿ ಶಿಕ್ಷೆಯನ್ನು ಹೈಕೋರ್ಟ್ ಎತ್ತಿಹಿಡಿದಿದೆ.

ಪೀಠವು ತನ್ನ ತೀರ್ಪಿನಲ್ಲಿ, 'ಕಾನೂನಿನ ರಕ್ಷಕರು ಸಮವಸ್ತ್ರದಲ್ಲಿ ಅಪರಾಧಿಗಳಂತೆ ವರ್ತಿಸಲು ಅನುಮತಿಸಲಾಗುವುದಿಲ್ಲ ಮತ್ತು ಇದಕ್ಕೆ ಅವಕಾಶ ನೀಡಿದರೆ ಅದು ಅರಾಜಕತೆಗೆ ಕಾರಣವಾಗುತ್ತದೆ' ಎಂದು ಹೇಳಿದೆ. 'ವಿಶ್ವಾಸಾರ್ಹ, ದೃಢವಾದ ಮತ್ತು ಕಾನೂನುಬದ್ಧವಾಗಿ ಸ್ವೀಕಾರಾರ್ಹ ಸಾಕ್ಷ್ಯಗಳೊಂದಿಗೆ' ನಕಲಿ ಎನ್‌ಕೌಂಟರ್‌ನಲ್ಲಿ ಗುಪ್ತಾ ಅವರ ಅಪಹರಣ, ತಪ್ಪಾದ ಜೈಲುವಾಸ ಮತ್ತು ಹತ್ಯೆಯನ್ನು ಪ್ರಾಸಿಕ್ಯೂಷನ್ ಅನುಮಾನಾಸ್ಪದವಾಗಿ ಸಾಬೀತುಪಡಿಸಿದೆ ಎಂದು ನ್ಯಾಯಾಲಯ ಹೇಳಿದೆ.

ರಾಮನಾರಾಯಣ್ ಆರೋಪಿಯ ವಶದಲ್ಲಿದ್ದಾಗ ಅವರನ್ನು ಬರ್ಬರವಾಗಿ ಹತ್ಯೆ ಮಾಡಲಾಗಿತ್ತು ಮತ್ತು ಇದನ್ನು ಮರೆಮಾಚಲು ಅಸಲಿ ಎನ್‌ಕೌಂಟರ್‌ನ ಬಣ್ಣ ನೀಡಲಾಗಿತ್ತು ಎಂಬುದನ್ನು ಪ್ರಾಸಿಕ್ಯೂಷನ್ ಅನುಮಾನಾಸ್ಪದವಾಗಿ ಸಾಬೀತುಪಡಿಸಿದೆ ಎಂದು ಹೈಕೋರ್ಟ್ ಹೇಳಿದೆ. ಸಾಕ್ಷ್ಯಾಧಾರಗಳಕೊರತೆಯಿಂದಾಗಿ ಶರ್ಮಾ ಅವರನ್ನು ಖುಲಾಸೆಗೊಳಿಸಿದ 2013ರ ಸೆಷನ್ಸ್ ನ್ಯಾಯಾಲಯದ ತೀರ್ಪನ್ನು ಪೀಠವು ತಳ್ಳಿಹಾಕಿತು.ಪ್ರದೀಪ್ ಶರ್ಮಾ 1983 ರ ಬ್ಯಾಚ್ ಪೊಲೀಸ್ ಅಧಿಕಾರಿ. ಮುಂಬೈ ಭೂಗತ ಜಗತ್ತಿನ ವಿರುದ್ಧದಅಭಿಯಾನಕ್ಕೆ ಹೆಸರುವಾಸಿಯಾಗಿದ್ದರು. ಅವರ ಸಮಯದಲ್ಲಿ ದಾವೂದ್ ಇಬ್ರಾಹಿಂ, ಛೋಟಾ ರಾಜನ್, ಅರುಣ್ ಗಾವ್ಲಿ ಮತ್ತು ಅಮರ್ ನಾಯಕ್ ಅವರಂತಹ ದರೋಡೆಕೋರರ ವಿರುದ್ಧ ಅನೇಕ ಪ್ರಮುಖ ಕಾರ್ಯಾಚರಣೆಗಳನ್ನು ನಡೆಸಲಾಯಿತು. 2010 ರಲ್ಲಿ, ರಾಮನಾರಾಯಣ ಗುಪ್ತಾ ಅಲಿಯಾಸ್ ಲಖನ್ ಭಯ್ಯಾ ನಕಲಿ ಎನ್‌ಕೌಂಟರ್‌ನಲ್ಲಿ ಭಾಗಿಯಾಗಿದ್ದಕ್ಕಾಗಿ ಶರ್ಮಾ ಅವರನ್ನು ಬಂಧಿಸಲಾಗಿತ್ತು.

2017 ರಲ್ಲಿ, ಅವರು ಮತ್ತೆ ಪೊಲೀಸ್ ಪಡೆಗೆ ಸೇರ್ಪಡೆಗೊಂಡಿದ್ದರು ಮತ್ತು ಆಗಿನ ಕಮಿಷನರ್ ಪರಂಬಿರ್ ಸಿಂಗ್ ಅವರ ಅಡಿಯಲ್ಲಿ ಥಾಣೆ ಪೊಲೀಸ್‌ನಲ್ಲಿ ಎಸಿಪಿಯಾಗಿ ಸೇವೆ ಸಲ್ಲಿಸಿದರು.

ಕೇವಲ ಎರಡು ವರ್ಷಗಳ ನಂತರ, ಜುಲೈ 2019 ರಲ್ಲಿ, ಅವರು ಅವಿಭಜಿತ ಶಿವಸೇನೆಗೆ ಸೇರಲು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದರು. ಅವರು ಮುಂಬೈನ ನಲಸೋಪಾರದಿಂದ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಅದರಲ್ಲಿ ಸೋತರು. 2021 ರಲ್ಲಿ, ಆಂಟಿಲಿಯಾ ಸ್ಫೋಟಕ ಪ್ರಕರಣ ಮತ್ತು ಮನ್ಸುಖ್ ಹಿರೇನ್ ಕೊಲೆ ಪ್ರಕರಣದಲ್ಲಿ ಪ್ರದೀಪ್ ಶರ್ಮಾ ಅವರನ್ನು ರಾಷ್ಟ್ರೀಯ ತನಿಖಾ ಸಂಸ್ಥೆ (ಎ???ಎ) ಎರಡನೇ ಬಾರಿಗೆ ಬಂಧಿಸಿತು. ಜಿಂಕೆಯ ಮೃತ ದೇಹವನ್ನು ವಿಲೇವಾರಿ ಮಾಡುವಲ್ಲಿ ಶರ್ಮಾ ಭಾಗಿಯಾಗಿದ್ದಾರೆ ಎಂದು ಆರೋಪಿಸಲಾಗಿತ್ತು.

ಶರ್ಮಾ ಅವರನ್ನು ಖುಲಾಸೆಗೊಳಿಸಿದ ಕೆಳ ನ್ಯಾಯಾಲಯದ ತೀರ್ಪನ್ನು ಹೈಕೋರ್ಟ್ 'ತಪ್ಪು' ಮತ್ತು 'ಸಮರ್ಥನೀಯ' ಎಂದು ಬಣ್ಣಿಸಿದೆ. ನ್ಯಾಯಾಲಯವು, 'ವಿಚಾರಣಾ ನ್ಯಾಯಾಲಯವು ಶರ್ಮಾ ವಿರುದ್ಧ ಲಭ್ಯವಿರುವ ಗಣನೀಯ ಸಾಕ್ಷ್ಯವನ್ನು ನಿರ್ಲಕ್ಷಿಸಿದೆ. ಪ್ರಕರಣದಲ್ಲಿ ಆತನ ಪಾಲ್ಗೊಳ್ಳುವಿಕೆಯನ್ನು ಸಾಕ್ಷ್ಯವು ಸ್ಪಷ್ಟವಾಗಿ ಸಾಬೀತುಪಡಿಸುತ್ತದೆ.

ನವೆಂಬರ್ 11, 2006 ರಂದು, ನವಿ ಮುಂಬೈನ ವಾಶಿಯಿಂದ ರಾಮನಾರಾಯಣ ಗುಪ್ತಾ ಅಲಿಯಾಸ್ ಲಖನ್ ಭಯ್ಯಾ ಎಂಬಾತನನ್ನು ಪೊಲೀಸ್ ತಂಡವು ರಾಜನ್ ಗ್ಯಾಂಗ್‌ನ ಸದಸ್ಯನೆಂಬ ಶಂಕೆಯ ಮೇಲೆ ಬಂಧಿಸಿತು. ಆತನೊಂದಿಗೆ ಆತನ ಸ್ನೇಹಿತ ಅನಿಲ್ ಭೇದಾ ಕೂಡ ಸಿಕ್ಕಿಬಿದ್ದಿದ್ದಾನೆ. ಅದೇ ಸಂಜೆ ಪಶ್ಚಿಮ ಮುಂಬೈನ ವರ್ಸೋವಾ ಉಪನಗರದಲ್ಲಿರುವ ನಾನಾ ನಾನಿ ಪಾರ್ಕ್ ಬಳಿ ನಡೆದ 'ನಕಲಿ' ಎನ್‌ಕೌಂಟರ್‌ನಲ್ಲಿ ಗುಪ್ತಾ ಕೊಲ್ಲಲ್ಪಟ್ಟರು.

ಕ್ರಿಮಿನಲ್ ಪಿತೂರಿ, ಕೊಲೆ, ಅಪಹರಣ ಮತ್ತು ಅಕ್ರಮ ಬಂಧನ ಸೇರಿದಂತೆ ಎಲ್ಲಾ ಆರೋಪಗಳಲ್ಲಿ ಶರ್ಮಾ ದೋಷಿ ಎಂದು ನ್ಯಾಯಾಲಯ ಹೇಳಿದೆ ಮತ್ತು ಜೀವಾವಧಿ ಶಿಕ್ಷೆಗೆ ಗುರಿಪಡಿಸಲಾಗಿದೆ. ಮೂರು ವಾರಗಳಲ್ಲಿ ಸಂಬಂಧಪಟ್ಟ ಸೆಷನ್ಸ್ ನ್ಯಾಯಾಲಯದ ಮುಂದೆ ಶರಣಾಗುವಂತೆ ಪೀಠ ಶರ್ಮಾಗೆ ಸೂಚಿಸಿದೆ.

ವಿಚಾರಣಾ ನ್ಯಾಯಾಲಯವು 13 ವ್ಯಕ್ತಿಗಳ ಅಪರಾಧವನ್ನು ಮಂಗಳವಾರ ಎತ್ತಿಹಿಡಿದಿದೆ ಮತ್ತು ಅವರಿಗೆ ಜೀವಾವಧಿ ಶಿಕ್ಷೆ ವಿಧಿಸಿದೆ. ಇದರಲ್ಲಿ 12 ಪೊಲೀಸರು ಮತ್ತು ಒಬ್ಬ ನಾಗರಿಕ ಸೇರಿದ್ದಾರೆ. ಶಿಕ್ಷೆಗೊಳಗಾದ ಆರೋಪಿಗಳಲ್ಲಿ ಮಾಜಿ ಪೊಲೀಸರಾದ ನಿತಿನ್ ಸರ್ತಾಪೆ, ಸಂದೀಪ್ ಸರ್ಕಾರ್, ತಾನಾಜಿ ದೇಸಾಯಿ, ಪ್ರದೀಪ್ ಸೂರ್ಯವಂಶಿ, ರತ್ನಾಕರ ಕಾಂಬಳೆ, ವಿನಾಯಕ್ ಶಿಂಧೆ, ದೇವಿದಾಸ್ ಸಪ್ಕಲ್, ಅನಂತ್ ಪಟಡೆ, ದಿಲೀಪ್ ಪಲಾಂಡೆ, ಪಾಂಡುರಾಗ್ ಕೋಕಂ, ಗಣೇಶ್ ಹರ್ಪುಡೆ, ಪ್ರಕಾಶ್ ಕದಂ ಮತ್ತು ನಾಗರಿಕ ಹಿತೇಶ್ ಸೋಲಂಕಿ ಸೇರಿದ್ದಾರೆ.ಇತರ ಆರು ಆರೋಪಿಗಳ ಅಪರಾಧ ಮತ್ತು ಜೀವಾವಧಿ ಶಿಕ್ಷೆಯನ್ನು ರದ್ದುಗೊಳಿಸಿ ಅವರನ್ನು ಖುಲಾಸೆಗೊಳಿಸಿದೆ. ಮನೋಜ್ ಮೋಹನ್ ರಾಜ್, ಸುನಿಲ್ ಸೋಲಂಕಿ, ಮೊಹಮ್ಮದ್ ಶೇಖ್, ಸುರೇಶ್ ಶೆಟ್ಟಿ, ಎ. ಖಾನ್ ಮತ್ತು ಶೈಲೇಂದ್ರ ಪಾಂಡೆ ಅವರನ್ನು ಖುಲಾಸೆಗೊಳಿಸಲಾಗಿದೆ. ಇವರೆಲ್ಲರೂ ಪ್ರಜೆಗಳು.

ಗುಪ್ತಾ ಅವರ ಸಹವರ್ತಿ ಅನಿಲ್ ಭೇದಾ ಡಿಸೆಂಬರ್ 2006 ರಲ್ಲಿಬಿಡುಗಡೆಯಾದರು. ಆದರೆ, ಜುಲೈ 2011 ರಲ್ಲಿ, ಅವರು ನ್ಯಾಯಾಲಯದಲ್ಲಿ ಸಾಕ್ಷಿ ಹೇಳುವ ಒಂದು ದಿನದ ಮೊದಲು, ಭೇದಾ ಅವರನ್ನು ಅಪಹರಿಸಿ ಕೊಲೆ ಮಾಡಲಾಗಿತ್ತು. ಸದ್ಯ ಸಿಐಡಿ ಪ್ರಕರಣದ ತನಿಖೆ ನಡೆಸುತ್ತಿದೆ.